**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಶ್ರೀ ಸಿ.ಟಿ.ರವಿ, ಶ್ರೀ ಹಣಮಂತ.ಆರ್. ನಿರಾಣಿ, ಶ್ರೀ ಭೋಜೆಗೌಡ, ಶ್ರೀ ನವೀನ್, ಡಿ.ಎಸ್ ಅರುಣ್ ಮತ್ತು ಶ್ರೀ ಹೇಮಲತಾ ನಾಯಕ್ ಇವರ ನಿಯಮ 330ರ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ:**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣಕ್ಕಾಗಿ 2023-24 ಮತ್ತು 2024-25ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಮೀಸಲಿಟ್ಟ ಅನುದಾನವನ್ನು ರಾಜ್ಯ ಸರ್ಕಾರವು ವಿವಿಧ ಯೋಜನೆಗಳ ಅನುಷ್ಠಾನಕ್ಕಾಗಿ ಬಳಕೆ ಮಾಡಿಕೊಳ್ಳಲು ಉದ್ದೇಶಿಸಿರುವುದರಿಂದ ದಲಿತರಿಗೆ ಅನ್ಯಾಯ ಮಾಡಿದಂತಾಗುತ್ತದೆ. ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನು ಅನ್ಯ ಉದ್ದೇಶಕ್ಕಾಗಿ ಬಳಸುವುದು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯನ್ನು ದುರ್ಬಳಕೆ ಹಾಗೂ ಸಂವಿಧಾನದ ಆಶೋತ್ತರಗಳಿಗೆ ದ್ರೋಹ ಮಾಡಿದಂತಾಗಿ, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆಯ ಉಲ್ಲಂಘನೆಯಾಗಿರುತ್ತದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಶ್ರೇಯೋಭಿವೃದ್ಧಿಗೆ ಬಳಕೆ ಮಾಡಬೇಕಾದ ಅನುದಾನಕ್ಕೆ ಕೊಕ್ಕೆ ಹಾಕಿ ಸರ್ಕಾರದ ವಿವಿಧ ಯೋಜನೆಗಳಿಗೆ ಅನುದಾನವನ್ನು ಬಳಕೆ ಮಾಡುವುದರಿಂದ ದಲಿತರ ಅಭಿವೃದ್ಧಿ ಕುಂಠಿತವಾಗಿದೆ. ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಮೀಸಲಿಟ್ಟ ಅನುದಾನವನ್ನು ಯಾವುದಕ್ಕೂ ವರ್ಗಾವಣೆ ಮಾಡುವುದಿಲ್ಲ ಎಂದು ಆಶ್ವಾಸನೆ ನೀಡಿದ ಸರ್ಕಾರ 2023-24, 2024-25 ಮತ್ತು 2025-26ನೇ ಸಾಲಿನಲ್ಲಿ ಒಟ್ಟು 39 ಸಾವಿರ ಕೋಟಿಗಳಿಗೂ ಅಧಿಕ ಮೊತ್ತವನ್ನು ವಿವಿಧ ಯೋಜನೆಗಳ ಅನುಷ್ಠಾನಕ್ಕೆ ವರ್ಗಾವಣೆ ಮಾಡಿರುವುದರಿಂದ ದಲಿತರ ಶ್ರೇಯೋಭಿವೃದ್ಧಿಗೆ ಅಪಾಯವನ್ನುಂಟು ಮಾಡಿದ್ದಾರೆ. ಅನ್ಯ ಉದ್ದೇಶಕ್ಕೆ ಮತ್ತು ವಿವಿಧ ಯೋಜನೆಗಳ ಅನುಷ್ಠಾನಕ್ಕೆ ಬಳಕೆ ಮಾಡಿರುವ ಹಣವನ್ನು ಮತ್ತೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಲ್ಲಿ ವಿನಿಯೋಗ ಮಾಡಲು ಸರ್ಕಾರ ಕ್ರಮ ತೆಗೆದುಕೊಳ್ಳುವಂತೆ ಮತ್ತು ಪರಿಶಿಷ್ಟ ಜಾತಿ ಮತ್ತು ಪಂಗಡದ ಸಮುದಾಯಗಳಿಗೆ ಅನ್ಯಾಯವಾಗದಂತೆ ಸೂಕ್ತ ಕ್ರಮವಹಿಸುವ ನಿಟ್ಟಿನಲ್ಲಿ ಸದನದಲ್ಲಿ ಈ ವಿಷಯವನ್ನು ಪ್ರಸ್ತಾಪಿಸಬಯಸುತ್ತೇವೆ.

**ಉತ್ತರ:**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಜನಸಂಖ್ಯೆಗೆ ಅನುಗುಣವಾಗಿ ಅಭಿವೃದ್ಧಿ ಆಯವ್ಯಯದಲ್ಲಿ ಅನುದಾನ ಮೀಸಲಿಡಲು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013 ಅನ್ನು 2014-15ನೇ ಸಾಲಿನಿಂದ ಜಾರಿಗೆ ತರಲಾಗಿದೆ. ಅದರಂತೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಅಭಿವೃದ್ಧಿಗಾಗಿ ಅನುದಾನವನ್ನು ಪ್ರತಿವರ್ಷವೂ ಹಂಚಿಕೆ ಮಾಡಲಾಗುತ್ತಿದೆ.

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಧಿನಿಯಮ 2013 ರಲ್ಲಿ ಕಲಂ 2(ಸಿ) ಅಡಿ ಸಾಮಾನ್ಯ ಸ್ಕೀಮ್ ಗಳು ಅಂದರೆ, "ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳನ್ನು ಒಳಗೊಂಡಂತೆ ಎಲ್ಲಾ ಸಾಮಾಜಿಕ ಸಮುದಾಯಗಳಿಗೆ ಪ್ರಯೋಜನವಾಗುವಂತಹ ಇಲಾಖೆಗಳ ವಾರ್ಷಿಕ ಯೋಜನೆಗಳಲ್ಲಿ ಒಳಗೊಂಡಿರುವ ಸ್ಕೀಮ್‌ಗಳು ಎಂದು" ವ್ಯಾಖಾನ ಇರುತ್ತದೆ.

SCSP/TSP ಕಾಯ್ದೆಯ ಸೆಕ್ಷನ್ 7(ಸಿ) ಯಡಿ ಸಾಮಾನ್ಯ ಸಾಮಾಜಿಕ ವಲಯದ ಕಾರ್ಯಕ್ರಮಗಳಿಗೆ ಹಂಚಿಕೆಯಾಗುವ ವೆಚ್ಚದಲ್ಲಿ ಎಸ್.ಸಿ/ಎಸ್.ಟಿ ಫಲಾನುಭವಿಗಳ/ ಜನಸಂಖ್ಯೆಯ ಪ್ರಮಾಣಕ್ಕನುಗುಣವಾಗಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿಯಲ್ಲಿ ಅನುದಾನವನ್ನು

---2

ಹಂಚಿಕೆ ಮಾಡಿ ಉಪಯೋಗಿಸಲು ಅವಕಾಶವಿರುತ್ತದೆ. ಅದರಂತೆ, ಗ್ಯಾರಂಟಿ ಯೋಜನೆಗಳಿಗೆ SCSP/TSP ಅಡಿಯಲ್ಲಿ ಅನುದಾನ ಹಂಚಿಕೆ ಮಾಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಫಲಾನುಭವಿಗಳಿಗೆ ಮಾತ್ರ ಉಪಯೋಗಿಸಲಾಗುತ್ತಿದೆ. ಆದ್ದರಿಂದ SCSP/TSP ಅನುದಾನವನ್ನು ಇತರೆ ಫಲಾನುಭವಿಗಳಿಗೆ ಉಪಯೋಗಿಸುತ್ತಿರುವುದಿಲ್ಲ.

ಅದರಂತೆ, ಪ್ರಾರಂಭದಿಂದಲೂ ಸದರಿ ಕಾಯ್ದೆಯ ಸೆಕ್ಷನ್ 7(ಸಿ) ಪ್ರಕಾರ ಶಿಕ್ಷಣ, ಆರೋಗ್ಯ, ಕೃಷಿ, ತೋಟಗಾರಿಕೆ, ನೀರಾವರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಯೋಜನಾ ಇಲಾಖೆ, ಇಂಧನ, ಇತ್ಯಾದಿ ಇಲಾಖೆಗಳಲ್ಲಿ ಎಲ್ಲರಿಗೂ ಅನ್ವಯವಾಗುವ ಯೋಜನೆಗಳು ಜಾರಿಯಲ್ಲಿದ್ದು, ಸದರಿ ಯೋಜನೆಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳ ಸಮಗ್ರ ಅಭಿವೃದ್ಧಿಗಾಗಿ SCSP/TSP ಅಡಿಯಲ್ಲಿ ಅನುದಾನವನ್ನು ಹಂಚಿಕೆ ಮಾಡಿ ಉಪಯೋಗಿಸಲಾಗುತ್ತಿದೆ. 2019-20 ರಿಂದ 2022-23 ರವರೆಗೆ ವಿವಿಧ ಇಲಾಖೆಗಳಲ್ಲಿ ಸೆಕ್ಷನ್ 7(ಸಿ) ಪ್ರಕಾರ ಒಟ್ಟು ರೂ.56,168.80 ಕೋಟಿಗಳನ್ನು ಹಂಚಿಕೆ ಮಾಡಲಾಗಿರುತ್ತದೆ. ಅದೇ ರೀತಿ 2025-26 ನೇ ಸಾಲಿನಲ್ಲಿ ಒಟ್ಟು ರೂ.26,105.62 ಕೋಟಿಗಳನ್ನು ಹಂಚಿಕೆ ಮಾಡಲಾಗಿರುತ್ತದೆ. ವಿವರಗಳನ್ನು ಅನುಬಂಧದಲ್ಲಿ ನೀಡಿದೆ.

ಬೇರೆ ರಾಜ್ಯಗಳು ಮತ್ತು ಭಾರತ ಸರ್ಕಾರದಲ್ಲಿಯೂ ಸಹ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ವಿವಿಧ ಇಲಾಖೆಯ ಸಾಮಾನ್ಯ ಯೋಜನೆಗಳಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನ ಹಂಚಿಕೆ ಮಾಡಿ ಎಸ್.ಸಿ/ಎಸ್.ಟಿ ಜನರಿಗೆ ಸೌಲಭ್ಯ ಒದಗಿಸಲಾಗುತ್ತಿದೆ. ಭಾರತ ಸರ್ಕಾರದ ನೀತಿ ಆಯೋಗದ ಮಾರ್ಗಸೂಚಿಗಳಂತೆ ವಿವಿಧ ಇಲಾಖೆಗಳ ವಿವಿಧ ಯೋಜನೆಗಳಲ್ಲಿ ಎಸ್.ಸಿ/ಎಸ್.ಟಿ ಜನರ ಅಭಿವೃದ್ಧಿಗಾಗಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನ ಹಂಚಿಕೆ ಮಾಡಲಾಗುತ್ತಿದೆ.

ಗೃಹಲಕ್ಷ್ಮಿ, ಅನ್ನಭಾಗ್ಯ, ಶಕ್ತಿ, ಗೃಹಜ್ಯೋತಿ ಮತ್ತು ಯುವನಿಧಿ ಈ ಕಾರ್ಯಕ್ರಮಗಳು ಎಲ್ಲರಿಗೂ ಪ್ರಯೋಜನವಾಗುವ ಅಭಿವೃದ್ಧಿ ಕಾರ್ಯಕ್ರಮಗಳಾಗಿದ್ದು, ಅವುಗಳಲ್ಲಿ SCSP/TSP ಅಡಿಯಲ್ಲಿ ಎಸ್.ಸಿ/ಎಸ್.ಟಿ ಫಲಾನುಭವಿಗಳ ಜನಸಂಖ್ಯೆಗನುಗುಣವಾಗಿ ಅನುದಾನವನ್ನು ಹಂಚಿಕೆ ಮಾಡಿ ವಿನಿಯೋಗಿಸಲಾಗುತ್ತಿದೆ.

ಮೇಲ್ಕಂಡ 5 ಕಾರ್ಯಕ್ರಮಗಳಿಗೆ SCSP/TSP ಅಡಿಯಲ್ಲಿ ವೆಚ್ಚ/ಹಂಚಿಕೆ ಮಾಡಿರುವ ಅನುದಾನದ ವಿವರ ಈ ಕೆಳಕಂಡಂತಿದೆ.

| **ಕ್ರ.ಸಂ** | **ವರ್ಷ** | **ವೆಚ್ಚ (ರೂ.ಕೋಟಿಗಳಲ್ಲಿ)** |
|---|---|---|
| 1 | 2023-24 | 10,287.16 |
| 2 | 2024-25 | 13,992.96 |
| | **ಒಟ್ಟು (ಅ)** | **24,280.12** |
| 3 | 2025-26ನೇ ಸಾಲಿನಲ್ಲಿ ಹಂಚಿಕೆ **(ಆ)** | 13,433.84 |
| | **ಒಟ್ಟು (ಅ+ಆ)** | **37,713.96** |

**ಸಕಇ 712 ಎಸ್‌ಎಲ್‌ಪಿ 2025**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**